ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 27-08-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಭೂಮಾಪನಾ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖಾ ನೌಕರರ ಸಂಘದ 36ನೇ ಸರ್ವಸದಸ್ಯರ ಸಭೆ:<br>ಉದ್ಘಾಟನೆ:<br>ಮನೋಜ್‌ಕುಮಾರ್ ಮೀನಾ,<br>ಆಯುಕ್ತರು,<br>ಭೂಮಾಪನಾ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ | 28–08–2016<br>ಭಾನುವಾರ<br>ಬೆಳಿಗ್ಗೆ<br>10–00 ಗಂಟೆಗೆ | ಶತಮಾನೋತ್ಸವ ಸಭಾಂಗಣ, ಎರಡನೇ ಮಹಡಿ, ಕರ್ನಾಟಕ ಸರ್ಕಾರದ ಸಚಿವಾಲಯದ ಕ್ಲಬ್, ಕಬ್ಬನ್ ಉದ್ಯಾನವನ, ಬೆಂಗಳೂರು– 560 001. |
| 2. | ಅರಸು ಶತಮಾನೋತ್ಸವ ಸಮಾರೋಪ ಸಮಾರಂಭ:<br>ಸಮಾರೋಪ ನುಡಿ:<br>ಪ್ರಸನ್ನ, ಹಿರಿಯ ರಂಗಕರ್ಮಿ<br>ಅಧ್ಯಕ್ಷತೆ:<br>ಕೆ. ಎಂ. ನಾಗರಾಜ್,<br>ಉಪಾಧ್ಯಕ್ಷರು,<br>ಡಿ. ದೇವರಾಜ ಅರಸು ಶತಮಾನೋತ್ಸವ ಕಾರ್ಯಕಾರಿ ಸಮಿತಿ, | 28–08–2016<br>ಭಾನುವಾರ<br>ಸಂಜೆ<br>6–30 ಗಂಟೆಗೆ | ಶತಮಾನೋತ್ಸವ ಸಭಾಂಗಣ, ಎರಡನೇ ಮಹಡಿ, ಕರ್ನಾಟಕ ಸರ್ಕಾರದ ಸಚಿವಾಲಯದ ಕ್ಲಬ್, ಕಬ್ಬನ್ ಉದ್ಯಾನವನ, ಬೆಂಗಳೂರು– 560 001. |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಎರಡು ದಿನದ ಭೇಟಿಗಾಗಿ ರಾಷ್ಟ್ರಪತಿಗಳ ಆಗಮನ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ)

ಭಾರತದ ಸನ್ಮಾನ್ಯ ರಾಷ್ಟ್ರಪತಿ ಪ್ರಣವ್ ಮುಖರ್ಜಿ ಅವರು ರಾಜ್ಯದ ಎರಡು ದಿನದ ಭೇಟಿಗಾಗಿ ಇಂದು ಸಂಜೆ ಬೆಂಗಳೂರಿನ ಹೆಚ್.ಎ.ಎಲ್. ವಿಮಾನ ನಿಲ್ದಾಣಕ್ಕೆ ವಿಶೇಷ ವಿಮಾನದ ಮೂಲಕ ಆಗಮಿಸಿದರು.

ಸನ್ಮಾನ್ಯ ರಾಷ್ಟ್ರಪತಿಗಳನ್ನು ರಾಜ್ಯದ ಮಾನ್ಯ ರಾಜ್ಯಪಾಲ ವಜುಭಾಯಿ ರೂಢಭಾಯಿ ವಾಲಾ, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರ ಮಂಜುನಾಥ ರೆಡ್ಡಿ, ರಾಜ್ಯದ ಮುಖ್ಯ ಕಾರ್ಯದರ್ಶಿ ಅರವಿಂದ ಜಾಧವ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಓಂಪ್ರಕಾಶ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಮೇಘರಿಕ್ ಸೇರಿದಂತೆ ಹಿರಿಯ ಅಧಿಕಾರಿಗಳು ಸೇರಿದಂತೆ ಇನ್ನಿತರ ಗಣ್ಯರು ಸನ್ಮಾನ್ಯ ರಾಷ್ಟ್ರಪತಿಗಳನ್ನು ಈ ಸಂದರ್ಭದಲ್ಲಿ ಬರಮಾಡಿಕೊಂಡರು.

ಬಾಬು/ಕೆಎಂ

# ಮುಖ್ಯಮಂತ್ರಿಗಳ ಪ್ರವಾಸ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ)

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗಸ್ಟ್ 28 ರಿಂದ 30 ರವರೆಗೆ ಧಾರವಾಡ, ಕೊಪ್ಪಳ ಹಾಗೂ ಮೈಸೂರು ಜಿಲ್ಲೆಗಳಿಗೆ ಭೇಟಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವರು.

ಬಾಬು:ಜಿಪಿಆರ್

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:28-08-2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ. ಬಿ.ಮಂಜುನಾಥ್ ಮತ್ತು ತಂಡ , ಬೆಂಗಳೂರು ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. ವಿಜಯ್ ಮತ್ತು ತಂಡ, ಬೆಂಗಳೂರು ರವರಿಂದ ಭಾವಗೀತೆ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
4) ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ), ಲಾಲ್‌ಬಾಗ್, ಬೆಂಗಳೂರು ರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5) ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀ.ರೂಪೇಶ್ ಮತ್ತು ಸ್ನೇಹಾ ಭಾಗವತ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- **ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ವಾಣಿ ಸ್ಕೂಲ್ , ಮಾಗಡಿ ರಸ್ತೆ , ಶಾಲ ಮಕ್ಕಳಾದ ಕು:ವಾಗ್ದೇವಿ , ಶ್ರದ್ಧಾ , ಸಾಕ್ಷಿ ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ದತ್ತಶ್ರೀ ಸಾಂಸ್ಕೃತಿಕ ವೇದಿಕೆ ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ

## II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಸಿದ್ಧಪಡಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.

ಬಾಬು/ಕೆಎಂ